ಶ್ರೀ ಹೆಚ್. ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಮತ್ತು ಆ) ಒಂದು. ಶ್ರೀ ಆದಿ ಚುಂಚನಗಿರಿ ಸಿ.ಪಿ.ಇಡಿ. ಕಾಲೇಜು, ಬಿ.ಜಿ.ನಗರ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ, ಇದಕ್ಕೆ ರಾಷ್ಟ್ರೀಯ ಶಿಕ್ಷಕ ಶಿಕ್ಷಣ ಪರಿಷತ್ ಇದರ ಅನುಮತಿ ಪಡೆಯುವ ಷರತ್ತಿಗೊಳಪಟ್ಟು ಹೊಸದಾಗಿ ಪ್ರಾರಂಭಿಸಲು ಆಕ್ಷೇಪಣಾ ರಹಿತ ಪತ್ರವನ್ನು ನೀಡಿದೆ.

ಇ) ಈ ಬಗ್ಗೆ ಅರ್ಜಿ ಸಲ್ಲಿಸಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ನಿರಂತರ ಶಿಕ್ಷಣ ಕಾರ್ಯಕ್ರಮ

2889 - ಶ್ರೀ ಕೆ. ಜಯರಾಮ ಶೆಟ್ಟಿ (ಉಳ್ಳಾಲ) : ಮಾನ್ಯ ವಯಸ್ಕರ ಶಿಕ್ಷಣ, ವೃತ್ತಿ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ ಹಾಗೂ ಸರ್ಕಾರಿ ಮುದ್ರಣಾಲಯ ಇಲಾಖೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಿರಂತರ ಶಿಕ್ಷಣ ಕಾರ್ಯಕ್ರಮದಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)?

ಆ) ನಿರಂತರ ಶಿಕ್ಷಣ ಕಾರ್ಯಕ್ರಮದಡಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ?

ಇ) ಈ ಕಾರ್ಯಕ್ರಮಗಳನ್ನು ಯಾವ ಯಾವ ಇಲಾಖೆಗಳ ಮುಖಾಂತರ ನಡೆಸಲಾಗುತ್ತದೆ.

ಈ) ಇದಕ್ಕೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎಷ್ಟು ಅನುದಾನ ಬಿಡುಗಡೆ ಮಾಡಿದೆ?

ಉ) ಈ ಕಾರ್ಯಕ್ರಮ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವುದಾಗಿದ್ದರೂ ಸರ್ಕಾರ ಹಸ್ತಾಂತರಿಸದಿರಲು ಕಾರಣವೇನು?

ಊ) ಸರ್ಕಾರ ನಿರಂತರ ಶಿಕ್ಷಣ ಕಾರ್ಯಕ್ರಮವನ್ನು ನಿಲ್ಲಿಸಿದೆಯೇ: ಹಾಗಿದ್ದಲ್ಲಿ ಈ ಕಾರ್ಯಕ್ರಮದ ಅನ್ವಯ ನೇಮಕಾತಿಗೊಳಿಸಿದ ಸಿಬ್ಬಂದಿಗೆ ಏನು ಪರ್ಯಾಯ ವ್ಯವಸ್ಥೆ ಸರ್ಕಾರ ಮಾಡಿದೆ?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ, ವೃತ್ತಿ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ ಹಾಗೂ ಸರ್ಕಾರಿ ಮುದ್ರಣಾಲಯ ಇಲಾಖೆಗಳ ಸಚಿವರು) :

ಅ) ಕೇಂದ್ರ ಸರ್ಕಾರವು ಸೋಷಿಯಲ್ ರೀಸರ್ಚ್ ಇನ್‌ಸ್ಟಿಟ್ಯೂಟ್ ಹಾಗೂ ಪ್ರೊಫೆಸರ್ ಅರುಣ ಘೋಷ ನೇತೃತ್ವದ ಪರಿಣಿತಿ ತಂಡ ಮಾಡಿರುವ ಶಿಫಾರಸ್ಸುಗಳನ್ವಯ "ನವಸಾಕ್ಷರರಿಗಾಗಿ ನಿರಂತರ ಶಿಕ್ಷಣ ಕಾರ್ಯಕ್ರಮ" ಎನ್ನುವ ಯೋಜನೆಯನ್ನು ರೂಪಿಸಿದೆ. ಇದರನ್ವಯ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದೆ. ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ನಿರಂತರ

ಶಿಕ್ಷಣ ಕಾರ್ಯಕ್ರಮ ಇನ್ನೂ ಮಂಜೂರಾಗಿರುವುದಿಲ್ಲ. ಹೀಗಾಗಿ ಈ ಯೋಜನೆ ಅಡಿ ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಒದಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ನಿರಂತರ ಶಿಕ್ಷಣ ಕಾರ್ಯಕ್ರಮದ ಮುಖ್ಯ ಉದ್ದೇಶಗಳು ಈ ಕೆಳಕಂಡಂತಿವೆ :

1. ಸಾಕ್ಷರತಾ ಕೌಶಲಗಳನ್ನು ಉಳಿಸಿಕೊಳ್ಳಲು ಸೌಲಭ್ಯ ಒದಗಿಸುವುದು.
2. ಮೂಲ ಸಾಕ್ಷರತೆಗಿಂತ ಹೆಚ್ಚಿನ ಕಲಿಕೆಗೆ ಸಾಧ್ಯತೆಯನ್ನೊದಗಿಸುವುದು.
3. ಸಾಕ್ಷರತೆಯನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಲು ಅವಕಾಶ ಕಲ್ಪಿಸುವುದು.
4. ನವಸಾಕ್ಷರರಿಗಾಗಿ ನಿರಂತರ ಶಿಕ್ಷಣವನ್ನು ಸಾಂಸ್ಥಿಕಗೊಳಿಸುವುದು.

ಈ ಉದ್ದೇಶಗಳ ಈಡಿಕೆಗಾಗಿ ಕೇಂದ್ರ ಸರ್ಕಾರದ ಈ ಯೋಜನೆ ಅಡಿ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾಗಿದೆ.

1) ನಿರಂತರ ಶಿಕ್ಷಣ ಕೇಂದ್ರಗಳನ್ನು ಸ್ಥಾಪಿಸುವುದು.

2) ನಿರಂತರ ಶಿಕ್ಷಣ ಕಾರ್ಯಕ್ರಮದಡಿ ಸಮಾನಾಂತರ ಕಾರ್ಯಕ್ರಮ ರೂಪಿಸಿ, ರೂಡಿಗತಿ, ಸಾಮಾನ್ಯ ಹಾಗೂ ವೃತ್ತಿಪರ ಶಿಕ್ಷಣಕ್ಕೆ ಪರ್ಯಾಯ ಶಿಕ್ಷಣ ಕಾರ್ಯಕ್ರಮ ಒದಗಿಸುವುದು.

3) ಆದಾಯ ಉತ್ಪಾದನಾ ಕಾರ್ಯಕ್ರಮ (ಐಜಿಪಿ) ಹಮ್ಮಿಕೊಳ್ಳುವುದು.

4) ಜೀವನ ಸುಧಾರಣಾ ಕಾರ್ಯಕ್ರಮ ಹಮ್ಮಿಕೊಳ್ಳುವುದು.

5) ವೈಯಕ್ತಿಕ ಆಸಕ್ತಿ ಬೆಳೆಸುವ ಕಾರ್ಯಕ್ರಮ ಹಮ್ಮಿಕೊಳ್ಳುವುದು.

ಇ) ಪ್ರಸ್ತುತ ಇನ್ನೂ ಕಾರ್ಯಕ್ರಮ ಜಾರಿ ಗೊಂಡಲ್ಲಿ, ಕೇಂದ್ರದ ಮಂಜೂರಾತಿ ಬಂದ ನಂತರ ಲೋಕ ಶಿಕ್ಷಣ ಇಲಾಖೆಯ ಉಸ್ತುವಾರಿಯಲ್ಲಿ ಕಾರ್ಯಕ್ರಮ ನಡೆಸಲಾಗುತ್ತದೆ.

ಈ) ಇನ್ನೂ ಯಾವುದೇ ಅನುದಾನ ಬಿಡುಗಡೆಯಾಗಿಲ್ಲ.

ಉ) ಕೇಂದ್ರ ಸರ್ಕಾರದಿಂದ ಈ ಕಾರ್ಯಕ್ರಮ ಇನ್ನೂ ಮಂಜೂರಾಗಿಲ್ಲದ ಕಾರಣ ಹಸ್ತಾಂತರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ನಿರಂತರ ಶಿಕ್ಷಣ ಕಾರ್ಯಕ್ರಮ ಇನ್ನೂ ಕೇಂದ್ರದಿಂದ ಮಂಜೂರಾಗಿಲ್ಲಲದ ಕಾರಣ ಪ್ರಶ್ನೆ ಉದ್ಭವಿಸುವುದಿಲ್ಲ.

ನಬಾರ್ಡ್ ಸಹಯೋಗದಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು

2891 - ಶ್ರೀ ಕೆ. ಜಯರಾಮ ಶೆಟ್ಟಿ (ಉಳ್ಳಾಲ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 2 ವರ್ಷಗಳಲ್ಲಿ ರಾಜ್ಯ ಸರ್ಕಾರವು ನಬಾರ್ಡ್ ಸಂಸ್ಥೆಯ ಸಂಯೋಗದಿಂದ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡಿದೆ?